# Bangalore
# Regional News
# 12.04.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. 371–ಜೆ ತಿದ್ದುಪಡಿ : ಪ್ರಗತಿಪಥದಲ್ಲಿ ಕಲ್ಯಾಣ ಕರ್ನಾಟಕ – ಸಚಿವ ಈಶ್ವರ್ ಖಂಡ್ರೆ
2. ಕೇಂದ್ರ ಸರ್ಕಾರದಿಂದ ಇಡೀ ವಿಶ್ವದಲ್ಲೇ ಮಹಿಳೆಯರಿಗೆ ಶೇಕಡ 33ರಷ್ಟು ಮೀಸಲಾತಿ ನಿರ್ಧಾರ – ಸಂಸದ ಡಾ.ಕೆ.ಸುಧಾಕರ್
3. ಮುಖ್ಯಮಂತ್ರಿ ಸಿದ್ದರಾಮಯ್ಯ ಚಿಕ್ಕಮಗಳೂರು ಜಿಲ್ಲಾ ಪ್ರವಾಸ ; ನಾಳೆ ಎನ್.ಆರ್.ಪುರ–ಹಂದೂರು ನಡುವಣ ಸೇತುವೆ ಲೋಕಾರ್ಪಣೆ
4. ಖ್ಯಾತ ಹಿನ್ನೆಲೆ ಗಾಯಕಿ ಆಶಾ ಭೋಸ್ಲೆ ನಿಧನ ; ನಾಳೆ ಮುಂಬೈನ ಶಿವಾಜಿ ಪಾರ್ಕ್‌ನಲ್ಲಿ ಅಂತ್ಯಕ್ರಿಯೆ

***************

371 ಜೆ ಸಾಂವಿಧಾನಿಕ ತಿದ್ದುಪಡಿಯಿಂದಾಗಿ ಕಲ್ಯಾಣ ಕರ್ನಾಟಕ ಪ್ರಗತಿಯ ಪಥದಲ್ಲಿ ಸಾಗುತ್ತಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ಬೀದರ್‌ನಲ್ಲಿ 40ನೇ ರಾಜ್ಯಪತ್ರಕರ್ತರ ಸಮ್ಮೇಳನದ ಸಮಾರೋಪದಲ್ಲಿ ಮಾತನಡಿದ ಅವರು, ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಮಾಧ್ಯಮಗಳು ಸಲಹೆ ನೀಡುವ ಮೂಲಕ ಸಹಕಾರ ನೀಡಬೇಕು ಎಂದರು.

ಅಭಿವ್ಯಕ್ತಿ ಸ್ವಾತಂತ್ರ್ಯದ ನೆಲಗಟ್ಟಿನಲ್ಲಿ ಮಾಧ್ಯಮಗಳು ಕಾರ್ಯ ನಿರ್ವಹಿಸುತ್ತಿದ್ದು, ಪತ್ರಿಕಾ ಸ್ವಾತಂತ್ರ್ಯ ಪರ್ತಕತರಿಗೆ ಜೀವಾಳವಾಗಿದೆ. ಇಂದು ಮಾಧ್ಯಮ ಕ್ಷೇತ ಸೇರಿದಂತೆ ಎಲ್ಲಾ ರಂಗದಲ್ಲೂ ಸ್ಪರ್ಧೆಯಿದ್ದು, ನಾವೇ ಮೊದಲು ಎಂಬ ಧಾವಂತದಲ್ಲಿ ಅಸತ್ಯ, ಆಧಾರರಹಿತ ಸುದ್ದಿಗಳು, ಬಿತ್ತರವಾಗದಂತೆ ಮಾಧ್ಯಮಗಳು ಎಚ್ಚರ ವಹಿಸಬೇಕು ಎಂದು ಸಲಹೆ ನೀಡಿದರು.

***************

ಇಡೀ ವಿಶ್ವದಲ್ಲಿ ಮಹಿಳೆಯರಿಗೆ ಶೇಕಡ 33 ಮೀಸಲಾತಿ ನೀಡುವ ಮಹತ್ವದ ನಿರ್ಧಾರ ತೆಗೆದುಕೊಂಡ ಮೊಟ್ಟ ಮೊದಲ ದೇಶವಾಗಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಹೊರಹೊಮ್ಮಿದೆ ಎಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರದ ಮೂಲಕ 2023ರಲ್ಲಿ ಸಂವಿಧಾನ ತಿದ್ದುಪಡಿ ಮೂಲಕ ಮಹಿಳೆಯರಿಗೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಶೇ.33ರಷ್ಟು ಮೀಸಲಾತಿ ಜಾರಿಗೆ ತರಲಾಗಿದೆ. ಇದನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಿದ್ದು, ಇದೇ ತಿಂಗಳ 16ರಿಂದ ನಡೆಯುವ ಸಂಸತ್ತಿನ ವಿಶೇಷ ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ನಿರ್ಧಾರ ತಾರ್ಕಿಕ ಅಂತ್ಯ ಕಾಣಲಿದೆ.

ದೇಶದ ಜನಸಂಖ್ಯೆಯ ಅರ್ಧದಷ್ಟಿರುವ ಮಹಿಳೆಯರ ಪರ ನೈಜಕಾಳಜಿ ಇರುವ ಕೇಂದ್ರ ಸರ್ಕಾರ ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಪ್ರತ್ಯೇಕ ಮೀಸಲಾತಿ ಒದಗಿಸಲು ಅವಕಾಶವಾಗುತ್ತದೆ ಎಂದು ಸಂಸದ ಡಾ. ಕೆ. ಸುಧಾಕರ್ ತಿಳಿಸಿದರು.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮತ್ತು ನಾಳೆ ಚಿಕ್ಕಮಗಳೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದು ನಾಳೆ ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲ್ಲಿದ್ದಾರೆ ಎಂದು ಶಾಸಕ ಟಿ.ಡಿ ರಾಜೇಗೌಡ ತಿಳಿಸಿದ್ದಾರೆ.

ಈ ಬಗ್ಗೆ ಮಾತಾನಾಡಿದ ಅವರು ಇಂದು ಸಂಜೆ ಜಿಲ್ಲೆಯ ಎನ್.ಆರ್ ಪುರಕ್ಕೆ ಆಗಮಿಸಿ ವಾಸ್ತವ್ಯ ಹೂಡಲ್ಲಿದ್ದು ನಾಳೆ ಬೆಳಗ್ಗೆ 10-30 ಕ್ಕೆ ಎನ್.ಆರ್ ಪುರ- ಹಂದೂರು ಸಂಪರ್ಕಿಸುವ ಭದ್ರಾ ಹಿನ್ನೀರಿನಲ್ಲಿ ಸುಮಾರು 38 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ಸೇತುವೆ ಲೋಕಾರ್ಪಣೆಗೊಳಿಸಲ್ಲಿದ್ದಾರೆ. ನಂತರ ಟಿ.ಬಿ ವೃತ್ತದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆಂದು ಅವರು ತಿಳಿಸಿದ್ದಾರೆ.

***************

ಹಣಕಾಸು ವರ್ಷ 2025 ರಲ್ಲಿ ಭಾರತದ ಪೇಟೆಂಟ್ ಅರ್ಜಿಗಳು ಒಂದು ಲಕ್ಷ 43 ಸಾವಿರ ದಾಟಿದ್ದು, ಇದು ಹಿಂದಿನ ವರ್ಷಕ್ಕಿಂತ ಶೇಕಡ 30 ರಷ್ಟು ಹೆಚ್ಚು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಇಂದು ಅವರು, ತಮಿಳುನಾಡು, ಕರ್ನಾಟಕ ಮತ್ತು ಮಹಾರಾಷ್ಟ್ರದ ನಾವೀನ್ಯಕಾರರು ಸಲ್ಲಿಸಿರುವ ಪೇಟೆಂಟುಗಳು ಶೇಕಡ 69ರಷ್ಟಿದ್ದು, ಭಾರತವು ವಿಶ್ವದ 6ನೇ ಅತಿದೊಡ್ಡ ಪೇಟೆಂಟ್ ಸಲ್ಲಿಸುವ ದೇಶವಾಗಿದೆ ಎಂದು ಹೇಳಿದ್ದಾರೆ.

***************

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ನೇತೃತ್ವದ ಭಾರತದ ಮಾನವ ಬಾಹ್ಯಾಕಾಶ ಕಾರ್ಯಕ್ರಮದ ಗಮನಾರ್ಹ ಪ್ರಗತಿಯನ್ನು ಗುರುತಿಸಲು ಭಾರತೀಯ ಅಂಚೆ ಇಲಾಖೆ ಕರ್ನಾಟಕ ಅಂಚೆ ವೃತ್ತವು 2 ಸ್ಮರಣಾರ್ಥ ಅಂಚೆ ಚೀಟಿಗಳು ಮತ್ತು ಸ್ಮರಣಿಕೆಗಳನ್ನು ಬಿಡುಗಡೆ ಮಾಡಿದೆ.

1962ರಲ್ಲಿ ವಿಕ್ರಂ-ಎ ಸಾರಾಭಾಯಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಆರಂಭವಾದ ಇಸ್ರೋ ಜಾಗತಿಕವಾಗಿ ಪ್ರಸಿದ್ಧಿಗೊಂಡಿದೆ. ಕಳೆದ ದಶಕಗಳಲ್ಲಿ ಇಸ್ರೋ ಚಂದ್ರಯಾನ-3 ಮತ್ತು ಆದಿತ್ಯ ಎಲ್-1 ನಂತಹ ಪ್ರಮುಖ ಕಾರ್ಯಾಚರಣೆಗಳು ಸೇರಿದಂತೆ ಉಪಗ್ರಹ ಅಭಿವೃದ್ಧಿ, ಉಡಾವಣಾ ವಾಹನ ತಂತ್ರಜ್ಞಾನ ಮತ್ತು ಅಂತರ್‌ಗ್ರಹ ಪರಿಶೋಧನೆಯಲ್ಲಿ ಮಹತ್ವದ ಮೈಲಿಗಲ್ಲು ಸಾಧಿಸಿದೆ.

ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ಅಂಚೆವೃತ್ತದ ಮುಖ್ಯ ಪ್ರಧಾನ ಅಂಚೆ ಅಧೀಕ್ಷಕರು ಕೆ.ಪ್ರಕಾಶ್, ಇಸ್ರೋ ಅಧ್ಯಕ್ಷ ಡಾ.ವಿ.ನಾರಾಯಣನ್, ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಭೇಟಿ ನೀಡಿದ ಮೊದಲ ಭಾರತೀಯ ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲ ಮತ್ತಿತರ ಗಣ್ಯರು ಅಂಚೆ ಚೀಟಿಗಳನ್ನು ಬಿಡುಗಡೆ ಮಾಡಿದರು.

ಈ ವೇಳೆ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲ ಮಾತನಾಡಿ, ಭಾರತೀಯ ಅಂಚೆ ಇಲಾಖೆಯು ಮಾನವ ಬಾಹ್ಯಾಕಾಶ ಕಾರ್ಯಕ್ರಮದ ಸ್ಮರಣಾರ್ಥ ಅಂಚೆ ಚೀಟಿಗಳು, ಸ್ಮರಣಿಕೆಗಳನ್ನು ಬಿಡುಗಡೆ ಮಾಡುವ ಮೂಲಕ ಇಸ್ರೋ ಹಿರಿಮೆಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಶುಭಾಂಶು ಶುಕ್ಲ (36 ಸೆಕೆಂಡ್‌ಗಳು)

***************

ಖ್ಯಾತ ಹಿರಿಯ ಗಾಯಕಿ ಮತ್ತು ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತರಾದ ಡಾ. ಆಶಾ ಭೋಸ್ಲೆ ಅವರು ಇಂದು ಮುಂಬೈನಲ್ಲಿ ತಮ್ಮ 93ನೇ ವಯಸ್ಸಿನಲ್ಲಿ ನಿಧನರಾದರು.

ಮಹಾರಾಷ್ಟ್ರದ ಸಾಂಸ್ಕೃತಿಕ ಸಚಿವ ಆಶಿಶ್ ಶೆಲಾರ್ ಮಾಧ್ಯಮಗಳೊಂದಿಗೆ ಮಾತನಾಡಿ ಈ ಸುದ್ದಿಯನ್ನು ಖಚಿತಪಡಿಸಿದ್ದಾರೆ. ಹೃದ್ರೋಗದ ಕಾರಣದಿಂದಾಗಿ ಅವರನ್ನು ನಿನ್ನೆ ಸಂಜೆ ಮುಂಬೈನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು ಎಂದು ಅವರ ಮೊಮ್ಮಗಳು ಜನೈ ಭೋಸ್ಲೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿದ್ದರು.

ಎಂಟು ದಶಕಗಳಿಗೂ ಹೆಚ್ಚು ಕಾಲ ವೃತ್ತಿಜೀವನವನ್ನು ಹೊಂದಿದ್ದ ಆಶಾ ಭೋಸ್ಲೆ ಅವರು ತಮ್ಮ ಬಹುಮುಖ ಪ್ರತಿಭೆಗೆ ಹೆಸರಾಗಿದ್ದರು. ಅವರು ರೋಮ್ಯಾಂಟಿಕ್ ಹಾಡುಗಳು ಮತ್ತು ಗಜಲ್‌ಗಳಿಂದ ಹಿಡಿದು ಪೆಪ್ಪಿ ನಂಬರ್‌ಗಳವರೆಗೆ ಅನೇಕ ಸ್ಮರಣೀಯ ಗೀತೆಗಳನ್ನು ಹಾಡಿದ್ದಾರೆ. ಅವರ ಅಂತ್ಯಕ್ರಿಯೆಯು ನಾಳೆ ಸಂಜೆ 4 ಗಂಟೆಗೆ ಶಿವಾಜಿ ಪಾರ್ಕ್‌ನಲ್ಲಿ ನಡೆಯಲಿದೆ.

***************

ಖ್ಯಾತ ಹಿನ್ನೆಲೆ ಗಾಯಕಿ, ಪದ್ಮವಿಭೂಷಣೆ ಆಶಾ ಬೋಸ್ಲೆ ಅವರ ನಿಧನಕ್ಕೆ ಗಣ್ಯರು ಕಂಬನಿ ಮಿಡಿದಿದ್ದಾರೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ ಅವರು, ಬಹುಭಾಷಾ ಗಾಯಕಿ ಆಶಾ ಬೋಸ್ಲೆ ಅವರ ಅಗಲಿಕೆಯಿಂದ ಸಂಗೀತದ ಒಂದು ಸುವರ್ಣ ಯುಗವೇ ಅಂತ್ಯಗೊಂಡಂತಾಗಿದೆ' ಎಂದು ತೀವ್ರ ಸಂತಾಪ ಸೂಚಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಭಾರತೀಯ ಚಿತ್ರರಂಗದ ಖ್ಯಾತ ಹಿನ್ನೆಲೆ ಗಾಯಕಿ ಆಶಾ ಭೋಸ್ಲೆ ಅವರ ನಿಧನದಿಂದ ದುಃಖಿತನಾಗಿದ್ದೇನೆ. ಕಳೆದ ಹಲವು ದಶಕಗಳಿಂದ ಸುಮಾರು 12 ಸಾವಿರಕ್ಕೂ ಅಧಿಕ ಹಾಡುಗಳ ಮೂಲಕ ಸಂಗೀತ ಪ್ರಿಯರನ್ನು ರಂಜಿಸಿದ ಸ್ವರ ಸಾಮ್ರಾಜ್ಞಿಯನ್ನು ಕಳೆದುಕೊಂಡು ಚಿತ್ರರಂಗ ಬಡವಾಗಿದೆ ಎಂದು ಹೇಳಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರಸಿದ್ಧ ಗಾಯಕಿ ಆಶಾ ಭೋಸ್ಲೆ ಅವರು ತಲೆಮಾರುಗಳಾದ್ಯಂತ ಅಸಂಖ್ಯಾತ ಮರೆಯಲಾಗದ ಹಾಡುಗಳಿಗೆ ಧ್ವನಿ ನೀಡಿದ್ದು, ಎಂದೆಂದಿಗೂ ಮಾಸದ ಪರಂಪರೆಯನ್ನು ಬಿಟ್ಟು ಹೋಗಿದ್ದಾರೆ ಎಂದು ಸಂತಾಪ ಸೂಚಿಸಿದ್ದಾರೆ.

ರಾಜ್ಯದ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಕಿರಿಯ ವಯಸ್ಸಿನಲ್ಲೇ ತಮ್ಮ ಅದ್ಭುತ ಕಂಠದಿಂದ ಗಾನಲೋಕಕ್ಕೆ ಪದಾರ್ಪಣೆ ಮಾಡಿದ್ದ ಆಶಾ ಭೋಸ್ಲೆ ಅವರು, ಬಹು ಭಾಷೆಗಳಲ್ಲಿ ಘಝಲ್, ಶಾಸ್ತ್ರೀಯ ಸಂಗೀತ ಹಾಗೂ ಸಿನಿಮಾ ಹಾಡುಗಳನ್ನು ಹಾಡುವ ಮೂಲಕ ಭಾರತೀಯ ಚಲನ ಚಿತ್ರರಂಗದ ಗಾನ ಸಂಪತ್ತಾಗಿದ್ದರು ಎಂದು ಬಣ್ಣಿಸಿದ್ದಾರೆ.

***************

ಅಮರನಾಥ ವಾರ್ಷಿಕ ಯಾತ್ರೆಯು ಈ ವರ್ಷದ ಜುಲೈ 3 ರಂದು ಆರಂಭವಾಗಿ ಆಗಸ್ಟ್ 28 ರಂದು ರಕ್ಷಾ ಬಂಧನ ದಿನದಂದು ಸಂಪನ್ನಗೊಳ್ಳಲಿದೆ. 57 ದಿನಗಳ ಯಾತ್ರೆ ನಡೆಯಲಿದ್ದು, ಜೂನ್ 29 ರ ಜ್ಯೇಷ್ಠ ಪೂರ್ಣಿಮೆಯಂದು ಶಿವನಿಗೆ ಪ್ರಥಮ ಪೂಜೆ ನಡೆಯಲಿದೆ ಎಂದು ಜಮ್ಮು-ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ತಿಳಿಸಿದ್ದಾರೆ.

ಏಪ್ರಿಲ್ 15 ರಿಂದ ಆಫ್‌ಲೈನ್ ಮತ್ತು ಆನ್‌ಲೈನ್ ಮೂಲಕ ಯಾತ್ರೆಗೆ ನೋಂದಾಯಿಸಿಕೊಳ್ಳಬಹುದಾಗಿದೆ.

***************

ವರನಟ, ಪದ್ಮಭೂಷಣ ಡಾ.ರಾಜ್‌ಕುಮಾರ್ ಅವರ 20ನೇ ವರ್ಷದ ಪುಣ್ಯ ಸ್ಮರಣೆ ಕಾರ್ಯಕ್ರಮವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಆಚರಿಸಲಾಯಿತು.

ಡಾ.ರಾಜ್ ಕುಮಾರ್ ಅಭಿಮಾನಿಗಳ ಸಂಘ, ಇನ್ನಿತರ ಕನ್ನಡಪರ ಸಂಘಟನೆಗಳ ಮುಖಂಡರು ಡಾ.ರಾಜ್ ಕುಮಾರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು.

ಈ ವೇಳೆ ಅವರು, ಡಾ.ರಾಜ್ ಕುಮಾರ್ ಅವರು ಅಪ್ರತಿಮ ಕಲಾವಿದರಾಗಿದ್ದು, ಕನ್ನಡ ಚಿತ್ರರಂಗಕ್ಕೆ ನೀಡಿರುವ ಕೊಡುಗೆ ಅನನ್ಯ. ಗೋಕಾಕ್ ಚಳವಳಿ ಮೊದಲಾದ ಹೋರಾಟಗಳಲ್ಲಿ ಭಾಗವಹಿಸಿ ಕನ್ನಡದ ಶಕ್ತಿಯಾಗಿದ್ದರು ಎಂದು ಸ್ಮರಿಸಿದರು.

***************

ಚಾಮರಾಜನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಭಗವಾನ್ ಮಹಾವೀರ ಜಯಂತಿಯು ಚಾಮರಾಜನಗರದ ಡಾ.ರಾಜ್ ಕುಮಾರ್ ರಂಗಮಂದಿರದಲ್ಲಿ ಅರ್ಥಪೂರ್ಣವಾಗಿ ನಡೆಯಿತು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಹಾವೀರರ ಸಂದೇಶ ಸರ್ವಧರ್ಮಕ್ಕೂ ಅವಶ್ಯವಾಗಿದೆ. ಪ್ರೀತಿ, ಅಹಿಂಸೆಯಿಂದ ಜಗತ್ತನ್ನು ಗೆಲ್ಲಬಹುದು ಎಂಬುದನ್ನು ಅವರು ತೋರಿಸಿಕೊಟ್ಟಿದ್ದಾರೆ. ಪ್ರಸ್ತುತ ವಿಶ್ವ ಶಾಂತಿ ಅಗತ್ಯ ಎಂದು ಹೇಳಿದರು.

***************

**ತುಮಕೂರು ಲೋಕಸಭಾ ಕ್ಷೇತ್ರದ ಕೊರಟಗೆರೆ ತಾಲ್ಲೂಕಿನ ಹೊಸಪಾಳ್ಯ ದುರ್ಗದ ನಾಗೇನಹಳ್ಳಿ ಗ್ರಾಮಕ್ಕೆ ಇಂದು ಭೇಟಿ ನೀಡಿದ ಕೇಂದ್ರ ಸಚಿವ ವಿ. ಸೋಮಣ್ಣ ಗ್ರಾಮಸ್ಥರೊಂದಿಗೆ ಚರ್ಚಿಸಿ, ಅವರ ಕುಂದು ಕೊರತೆಗಳನ್ನು ಆಲಿಸಿದರು.**

**ಗ್ರಾಮದಲ್ಲಿ ಮೂಲಭೂತ ಸೌಕರ್ಯಗಳಿಗೆ ಯಾವುದೇ ರೀತಿಯಿಂದ ತೊಂದರೆ ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕೆಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಕೇಂದ್ರ ಸಚಿವರು ಸೂಚನೆ ನೀಡಿದರು.**

***************

**ಇನ್ನು ಹವಾವರ್ತಮಾನ,**

**ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಉಳಿದಂತೆ ಒಣ ಹವೆ ಮುಂದುವರೆದಿದೆ.**

**ಕಳಸಾದಲ್ಲಿ 2 ಸೆಂಟಿ ಮೀಟರ್ ಮಳೆಯಾಗಿದೆ. ಕಲಬುರಗಿಯಲ್ಲಿ ಗರಿಷ್ಠ ತಾಪಮಾನ 41.6 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.**

**ಮುನ್ಸೂಚನೆಯಂತೆ ಮುಂದಿನ 24 ಗಂಟೆಗಳಲ್ಲಿ ದಕ್ಷಿಣ ಒಳನಾಡು, ಕರಾವಳಿ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ.**

**ಬೆಂಗಳೂರು ಸುತ್ತಮುತ್ತ ಶುಭ್ರ ಆಕಾಶ, ಕೆಲವೊಮ್ಮೆ ಭಾಗಶಃ ಮೋಡ ಕವಿದ ವಾತಾವರಣ. ಗರಿಷ್ಠ 36, ಕನಿಷ್ಠ 24 ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.**

*******ಮುಕ್ತಾಯ*******